**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಉತ್ತರ:**

* * *

ವಿಷಯ:- 2024-25ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ವಿಷಯಗಳ ಉಪನ್ಯಾಸಕರನ್ನು ಹೆಚ್ಚುವರಿ ಎಂದು ಗುರ್ತಿಸಿ ತಾತ್ಕಲಿಕ ಪಟ್ಟಿ ಮಾಡಿರುವುದನ್ನು ರದ್ದುಪಡಿಸುವ ವಿಷಯವನ್ನು ಸದನದ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2024-25ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ವಿಷಯಗಳ ಉಪನ್ಯಾಸಕರನ್ನು ಹೆಚ್ಚುವರಿ ಎಂದು ಗುರ್ತಿಸಿ ತಾತ್ಕಾಲಿಕ ಪಟ್ಟಿ ಮಾಡಿ ಪ್ರಕಟಿಸಿ ದಿನಾಂಕ:19-07-2024ರಂದು ಆದೇಶ ಹೊರಡಿಸಿ ಪಟ್ಟಿ ಬಿಡುಗಡೆ ಮಾಡಲಾಗಿದೆ. ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕರನ್ನು 2023-24ನೇ ಸಾಲಿನ ದಾಖಲಾತಿಯನ್ನು ಪರಿಗಣಿಸಿ ಹೆಚ್ಚುವರಿಯೆಂದು ಗುರ್ತಿಸಿ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಪಟ್ಟಿಯನ್ನು 2023-24ನೇ ಸಾಲಿನ ವಿದ್ಯಾರ್ಥಿಗಳ ದಾಖಲಾತಿ ಆಧಾರದ ಮೇಲೆ ಪ್ರಕಟ ಮಾಡಿದ್ದು ಇದು ಸಂಪೂರ್ಣ ಅವೈಜ್ಞಾನಿಕವಾಗಿದೆ. 2024-25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಇನ್ನು ಒಂದು ವಾರ್ಷಿಕ ಪರೀಕ್ಷೆ ಬಾಕಿ ಇದ್ದು, ಇನ್ನು ಪದವಿ ಪೂರ್ವ ತರಗತಿಗಳಿಗೆ ವಿದ್ಯಾರ್ಥಿಗಳು ದಾಖಲಾತಿ ಆಗುತ್ತಿದ್ದಾರೆ. ಆದರೆ ಪ್ರಸ್ತುತ ವರ್ಷದ ವಿದ್ಯಾರ್ಥಿಗಳ ದಾಖಲಾತಿಯನ್ನು ಪರಿಗಣಿಸದೆ 2023-24ನೇ ಸಾಲಿನ ವಿದ್ಯಾರ್ಥಿಗಳ ದಾಖಲಾತಿಯನ್ನು ಪರಿಗಣಿಸಿ ಹೆಚ್ಚವರಿ ಪಟ್ಟಿ ಮಾಡಿರುವುದರಿಂದ 50 ವರ್ಷಕ್ಕಿಂತ ಹೆಚ್ಚು ವಯಸ್ಸಾಗಿರುವ ಅನಾರೋಗ್ಯದ ಸಮಸ್ಯೆಯಿರುವ ಉಪನ್ಯಾಸಕರಿಗೆ ತುಂಬಾ ತೊಂದರೆಯಾಗಿದೆ. ಈಗಾಗಲೇ ಹೈಕೋರ್ಟ್‌ನಲ್ಲಿಯು ಸಹ 50 ವರ್ಷಕ್ಕಿಂತ ಹೆಚ್ಚು ವಯಸ್ಸಾಗಿರುವ ಶಿಕ್ಷಕರು/ಉಪನ್ಯಾಸಕರುಗಳನ್ನು ಹೆಚ್ಚುವರಿ ಎಂದು ಪರಿಗಣಿಸಿ ವರ್ಗಾವಣೆ ಮಾಡಿರುವುದನ್ನು ಸರಿಯಾದ ಕ್ರಮವಲ್ಲವೆಂದು ರದ್ದುಗೊಳಿಸಿದೆ. ಆದ್ದರಿಂದ 55 ವರ್ಷ ಮೇಲ್ಪಟ್ಟ ಶಿಕ್ಷಕರು/ಉಪನ್ಯಾಸಕರಿಗೆ ವರ್ಗಾವಣೆ ನಿಯಮಗಳಲ್ಲಿ ವಿನಾಯಿತಿ ಇದ್ದರೂ ಸಹ ಹೆಚ್ಚುವರಿ ಎಂದು ಪರಿಗಣಿಸಿ ಪಟ್ಟಿ ಬಿಡುಗಡೆ ಮಾಡಲಾಗಿದೆ. ಎಸ್.ಎಸ್.ಎಲ್.ಸಿ. 3ನೇ ಪರೀಕ್ಷೆ ನಡೆದು ವಿದ್ಯಾರ್ಥಿಗಳು ಪದವಿ ಪೂರ್ವ ತರಗತಿಗಳಿಗೆ ದಾಖಲಾಗುತ್ತಾರೆ. ಆದರೆ ಪದವಿ ಪೂರ್ವ ಶಿಕ್ಷಣ ಇಲಾಖೆಯು 2023-24ನೇ ಸಾಲಿನ ವಿದ್ಯಾರ್ಥಿಗಳ ದಾಖಲಾತಿಯನ್ನು ಪರಿಗಣಿಸಿ ಹೆಚ್ಚುವರಿ ಉಪನ್ಯಾಸಕರ ತಾತ್ಕಾಲಿಕ ಪಟ್ಟಿ ಪ್ರಕಟಿಸಿರುವುದು ಅವೈಜ್ಞಾನಿಕವಾಗಿರುವುದರಿಂದ ನೂರಾರು ಉಪನ್ಯಾಸಕರಿಗೆ ತೊಂದರೆಯಾಗಿರುವುದರಿಂದ ಈ ಪ್ರಕ್ರಿಯೆಯನ್ನು ಕೈಬಿಡಬೇಕೆಂಬ ವಿಷಯವನ್ನು ಸದನದ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸುತ್ತೇನೆ.

## ಉತ್ತರ

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮಗಳು 2020 ರನ್ವಯ ಹಾಗೂ ಅದರ ಅಡಿಯಲ್ಲಿ ರೂಪಿಸಲಾಗಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 32 ಟಿಪಿಯು 2021 ದಿನಾಂಕ: 12-05-2022 ರಲ್ಲಿ

ಹೊರಡಿಸಲಾಗಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಪ್ರಾಂಶುಪಾಲರ ಮತ್ತು ಉಪನ್ಯಾಸಕರ ವರ್ಗಾವಣೆ ನಿಯಂತ್ರಣ) ನಿಯಮಗಳು, 2022 ರ ನಿಯಮ 6(3) ಮತ್ತು 10 ರನ್ವಯ ಪ್ರತಿ ಪರ್ಯಾಯ ವರ್ಷವೂ ಮಂಜೂರಾದ ಹುದ್ದೆಗಳು ಮತ್ತು ಅದರಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರನ್ನು ನಿಯಮಗಳನ್ವಯ ನಿಗದಿಪಡಿಸಿದ ವಿದ್ಯಾರ್ಥಿ-ಉಪನ್ಯಾಸಕ ಅನುಪಾತದ ಆಧಾರದ ಮೇಲೆ ಸಮರ್ಪಕವಾಗಿ ಮರುಹಂಚಿಕೆ ಮಾಡತಕ್ಕದ್ದು ಎಂದು ನಿಯಮಿಸಿರುವ ಹಿನ್ನೆಲೆಯಲ್ಲಿ ಈ ಹಿಂದೆ 2022 ನೇ ಸಾಲಿನಲ್ಲಿ ಹೆಚ್ಚುವರಿ ವರ್ಗಾವಣೆಯನ್ನು ನಡೆಸಲಾಗಿದ್ದು, ಈ ವರ್ಷವು ಅಂದರೆ 2024 ನೇ ವರ್ಷವು ಪರ್ಯಾಯ ವರ್ಷವಾಗಿರುವ ಕಾರಣ ನಿಯಮಗಳ ಅನುಸಾರ ಹೆಚ್ಚುವರಿ ವರ್ಗಾವಣೆಯನ್ನು ನಡೆಸಲಾಗುತ್ತಿದೆ.

(ಎಸ್. ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಸಂಖ್ಯೆ:ಇಪಿ 279 ಡಿಜಿಡಬ್ಲೂ 2024